# ಉದ್ಯೋಗಾವಕಾಶ ಮಾಹಿತಿ ಕಾರ್ಯಕ್ರಮ ಯಶಸ್ವಿ




**ಉದಯಕಾಲ ನ್ಯೂಸ್**

**ಹಳಿಯಾಳ:** ಕೆಎಲ್ಎಸ್ ವಿಡಿಐಟಿ ಮಹಾವಿದ್ಯಾಲಯದ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗವು ವಿದ್ಯಾರ್ಥಿಗಳಿಗೆ ಮಧ್ಯ ಪ್ರಾಚ್ಯ ಹಾಗೂ ಗಲ್ಫ್ ರಾಷ್ಟ್ರಗಳಲ್ಲಿ ಇರುವ ಉದ್ಯೋಗಾವಕಾಶಗಳ ಬಗ್ಗೆ ಮಾಹಿತಿ ಕಾರ್ಯಕ್ರಮವನ್ನು ಅಕ್ಟೋಬರ್ 14ರಂದು ಏರ್ಪಡಿಸಿತ್ತು.

ಗಲ್ಫ್ ದೇಶದ ಅಲ್ ಯಮಾಮಾ ಕಾರ್ಪೊರೇಶನ್ನಲ್ಲಿ ಎಕ್ಸ್ಟ್ರಾ ಲೋ ವೋಲ್ಟೇಜ್ ಸಿಸ್ಟಮ್ ಇಂಜಿನಿಯರ್ ಆಗಿ ಕಾರ್ಯ ನಿರ್ವಹಿಸುತ್ತಿರುವ ಮಹಾವಿದ್ಯಾಲಯದ ಮಾಜಿ ವಿದ್ಯಾರ್ಥಿ ಪ್ರಭವ ದೇಶಪಾಂಡೆ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು. ಎಲೆಕ್ಟ್ರಾನಿಕ್ಸ್ ವಿಭಾಗದಲ್ಲಿ ಆಗುತ್ತಿರುವ ನೂತನ ಅನ್ವೇಷಣೆಗಳು ಹಾಗೂ ಅವಶ್ಯವಿರುವ ಕೌಶಲ್ಯಗಳ ಕುರಿತು ಮಾಹಿತಿ ನೀಡಿದರು. ಫೈರ್ ಅಲಾರ್ಮ್, ಸೆಕ್ಯುರಿಟಿ ಸಿಸ್ಟಂ, ಕೋರೋನ ನಂತರದಲ್ಲಿ ತಾವು ಕಾರ್ಯನಿರ್ವಹಿಸುತ್ತಿರುವ ಕಂಪನಿಯಲ್ಲಿ ಆದಂತಹ ವಿನೂತನ ಬೆಳವಣಿಗೆಗಳ ಕುರಿತು ತಿಳಿಸಿದರು. ಎಲೆಕ್ಟ್ರಾನಿಕ್ಸ್ ಇಂಜಿನಿಯರ್ ಗಳಿಗೆ ವಿದೇಶದಲ್ಲಿ ಬಹು ಬೇಡಿಕೆ ಇದ್ದು , ವಿದ್ಯಾರ್ಥಿಗಳು ಈ ನಿಟ್ಟಿನಲ್ಲಿ ಪೂರ್ವಸಿದ್ಧತೆ ಮಾಡಿಕೊಳ್ಳಬೇಕೆಂದು ಹೇಳಿದರು. ವಿದ್ಯಾರ್ಥಿಗಳ ಕೌಶಲ್ಯ ಅಭಿವೃದ್ಧಿಗೆ ಮಹಾವಿದ್ಯಾಲಯವು ಕೈಗೊಂಡಿರುವ ಹಲವು ಉಪಕ್ರಮಗಳ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು.

ಮಾಜಿ ವಿದ್ಯಾರ್ಥಿಗಳು ಮಹಾವಿದ್ಯಾಲಯಕ್ಕೆ ಭೇಟಿ ನೀಡುವದರಿಂದ, ವಿದ್ಯಾರ್ಥಿಗಳಿಗೆ ಕೈಗರಿಕಾ ಕ್ಷೇತ್ರದಲ್ಲಿನ ಆಗು ಹೋಗುಗಳ ಅರಿವು ಹೊಂದಿ, ಆ ನಿಟ್ಟಿನಲ್ಲಿ ಪ್ರಯತ್ನ ಶೀಲರಾಗಲು ಸಹಕಾರಿಯಾಗುತ್ತದೆ ಎಂದು ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ಹೇಳಿದರು. ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗದ ಮುಖ್ಯಸ್ಥರಾದ ಡಾ. ಮಹೇಂದ್ರ ಮ. ದೀಕ್ಷಿತ್ ಕಾರ್ಯಕ್ರಮ ಆಯೋಜಿಸಿದ್ದರು. ಪ್ರೊ. ರೋಹಿಣಿ ಕಲ್ಲೂರ, ಪ್ರೊ. ನಿಖಿಲ್ ಕುಲಕರ್ಣಿ, ಪ್ರೊ. ಸೂರಜ್ ಕಡ್ಲಿ ಹಾಗೂ ಪ್ರೊ. ವಿಜಯಲಕ್ಷ್ಮಿ ಕಲಾಲ್ ಹಾಗೂ ಐದನೇ ಸೆಮಿಸ್ಟರ್ ನ 120ಕ್ಕೂ ಅಧಿಕ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.


Hubballi Edition
Oct 16, 2024 Page No. 8
Powered by: erelego.com

# ಉದ್ಯೋಗಾವಕಾಶ ಮಾಹಿತಿ ಕಾರ್ಯಕ್ರಮ ಯಶಸ್ವಿ




**ಉದಯಕಾಲ ನ್ಯೂಸ್**

**ಹಳಿಯಾಳ:** ಕೆಎಲ್ಎಸ್ ವಿಡಿಐಟಿ ಮಹಾವಿದ್ಯಾಲಯದ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗವು ವಿದ್ಯಾರ್ಥಿಗಳಿಗೆ ಮಧ್ಯ ಪ್ರಾಚ್ಯ ಹಾಗೂ ಗಲ್ಫ್ ರಾಷ್ಟ್ರಗಳಲ್ಲಿ ಇರುವ ಉದ್ಯೋಗಾವಕಾಶಗಳ ಬಗ್ಗೆ ಮಾಹಿತಿ ಕಾರ್ಯಕ್ರಮವನ್ನು ಅಕ್ಟೋಬರ್ 14ರಂದು ಏರ್ಪಡಿಸಿತ್ತು.

ಗಲ್ಫ್ ದೇಶದ ಅಲ್ ಯಮಾಮಾ ಕಾರ್ಪೊರೇಶನ್ನಲ್ಲಿ ಎಕ್ಸ್ಟ್ರಾ ಲೋ ವೋಲ್ಟೇಜ್ ಸಿಸ್ಟಮ್ ಇಂಜಿನಿಯರ್ ಆಗಿ ಕಾರ್ಯ ನಿರ್ವಹಿಸುತ್ತಿರುವ ಮಹಾವಿದ್ಯಾಲಯದ ಮಾಜಿ ವಿದ್ಯಾರ್ಥಿ ಪ್ರಭವ ದೇಶಪಾಂಡೆ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು. ಎಲೆಕ್ಟ್ರಾನಿಕ್ಸ್ ವಿಭಾಗದಲ್ಲಿ ಆಗುತ್ತಿರುವ ನೂತನ ಅನ್ವೇಷಣೆಗಳು ಹಾಗೂ ಅವಶ್ಯವಿರುವ ಕೌಶಲ್ಯಗಳ ಕುರಿತು ಮಾಹಿತಿ ನೀಡಿದರು. ಫೈರ್ ಅಲಾರ್ಮ್, ಸೆಕ್ಯುರಿಟಿ ಸಿಸ್ಟಂ, ಕೋರೋನ ನಂತರದಲ್ಲಿ ತಾವು ಕಾರ್ಯನಿರ್ವಹಿಸುತ್ತಿರುವ ಕಂಪನಿಯಲ್ಲಿ ಆದಂತಹ ವಿನೂತನ ಬೆಳವಣಿಗೆಗಳ ಕುರಿತು ತಿಳಿಸಿದರು. ಎಲೆಕ್ಟ್ರಾನಿಕ್ಸ್ ಇಂಜಿನಿಯರ್ ಗಳಿಗೆ ವಿದೇಶದಲ್ಲಿ ಬಹು ಬೇಡಿಕೆ ಇದ್ದು , ವಿದ್ಯಾರ್ಥಿಗಳು ಈ ನಿಟ್ಟಿನಲ್ಲಿ ಪೂರ್ವಸಿದ್ಧತೆ ಮಾಡಿಕೊಳ್ಳಬೇಕೆಂದು ಹೇಳಿದರು. ವಿದ್ಯಾರ್ಥಿಗಳ ಕೌಶಲ್ಯ ಅಭಿವೃದ್ಧಿಗೆ ಮಹಾವಿದ್ಯಾಲಯವು ಕೈಗೊಂಡಿರುವ ಹಲವು ಉಪಕ್ರಮಗಳ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು.

ಮಾಜಿ ವಿದ್ಯಾರ್ಥಿಗಳು ಮಹಾವಿದ್ಯಾಲಯಕ್ಕೆ ಭೇಟಿ ನೀಡುವದರಿಂದ, ವಿದ್ಯಾರ್ಥಿಗಳಿಗೆ ಕೈಗರಿಕಾ ಕ್ಷೇತ್ರದಲ್ಲಿನ ಆಗು ಹೋಗುಗಳ ಅರಿವು ಹೊಂದಿ, ಆ ನಿಟ್ಟಿನಲ್ಲಿ ಪ್ರಯತ್ನ ಶೀಲರಾಗಲು ಸಹಕಾರಿಯಾಗುತ್ತದೆ ಎಂದು ಪ್ರಾಚಾರ್ಯ ಡಾ. ವಿ ಎ ಕುಲಕರ್ಣಿ ಹೇಳಿದರು. ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗದ ಮುಖ್ಯಸ್ಥರಾದ ಡಾ. ಮಹೇಂದ್ರ ಮ. ದೀಕ್ಷಿತ್ ಕಾರ್ಯಕ್ರಮ ಆಯೋಜಿಸಿದ್ದರು. ಪ್ರೊ. ರೋಹಿಣಿ ಕಲ್ಲೂರ, ಪ್ರೊ. ನಿಖಿಲ್ ಕುಲಕರ್ಣಿ, ಪ್ರೊ. ಸೂರಜ್ ಕಡ್ಲಿ ಹಾಗೂ ಪ್ರೊ. ವಿಜಯಲಕ್ಷ್ಮಿ ಕಲಾಲ್ ಹಾಗೂ ಐದನೇ ಸೆಮಿಸ್ಟರ್ ನ 120ಕ್ಕೂ ಅಧಿಕ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.


Hubballi Edition
Oct 16, 2024 Page No. 8
Powered by: erelego.com

# ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಉದ್ಯೋಗಾವಕಾಶ ಮಾಹಿತಿ ಕಾರ್ಯಕ್ರಮ ಯಶಸ್ವಿ

ನುಡಿಜೇನು ವರದಿ



**ಹಳಿಯಾಳ:** ಕೆಎಲ್ಎಸ್ ವಿಡಿಐಟಿ ಮಹಾವಿದ್ಯಾಲಯದ ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗವು ವಿದ್ಯಾರ್ಥಿಗಳಿಗೆ ಮಧ್ಯ ಪ್ರಾಚ್ಯ ಹಾಗೂ ಗಲ್ಫ್ ರಾಷ್ಟ್ರಗಳಲ್ಲಿ ಇರುವ ಉದ್ಯೋಗಾವಕಾಶಗಳ ಬಗ್ಗೆ ಮಾಹಿತಿ ಕಾರ್ಯಕ್ರಮವನ್ನು ಅ.14 ರಂದು ಏರ್ಪಡಿಸಲಾಗಿತ್ತು. ಗಲ್ಫ್ ದೇಶದ ಆಲ್ ಯಮಾಮಾ ಕಾರ್ಪೊರೇಶನ್‌ನಲ್ಲಿ ಎಕ್ಸ್ಟ್ರಾ ಲೋ ವೋಲ್ಟೇಜ್ ಸಿಸ್ಟಮ್ ಇಂಜಿನಿಯರ್ ಆಗಿ ಕಾರ್ಯ ನಿರ್ವಹಿಸುತ್ತಿರುವ ಮಹಾವಿದ್ಯಾಲಯದ ಮಾಜಿ ವಿದ್ಯಾರ್ಥಿ ಪ್ರಭವ ದೇಶಪಾಂಡೆ ಸಂಪನ್ಮೂಲ ವ್ಯಕ್ತಿಗಳಾಗಿ ಆಗಮಿಸಿ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದರು.

ಎಲೆಕ್ಟ್ರಾನಿಕ್ಸ್ ವಿಭಾಗದಲ್ಲಿ ಆಗುತ್ತಿರುವ ನೂತನ ಅನ್ವೇಷಣೆಗಳು ಹಾಗೂ ಅವಶ್ಯವಿರುವ ಕೌಶಲ್ಯಗಳ ಕುರಿತು ಮಾಹಿತಿ ನೀಡಿದರು. ಫೈರ್ ಅಲಾರ್ಮ್, ಸೆಕ್ಯುರಿಟಿ ಸಿಸ್ಟಂ, ಕೋರೋನ ನಂತರದಲ್ಲಿ ತಾವು ಕಾರ್ಯನಿರ್ವಹಿಸುತ್ತಿರುವ ಕಂಪನಿಯಲ್ಲಿ ಆದಂತಹ ವಿನೂತನ ಬೆಳವಣಿಗೆಗಳ ಕುರಿತು ತಿಳಿಸಿದರು. ಎಲೆಕ್ಟ್ರಾನಿಕ್ಸ್ ಇಂಜಿನಿಯರ್‌ಗಳಿಗೆ ವಿದೇಶದಲ್ಲಿ ಬಹು ಬೇಡಿಕೆ ಇದ್ದು, ವಿದ್ಯಾರ್ಥಿಗಳು ಈ ನಿಟ್ಟಿನಲ್ಲಿ ಪೂರ್ವಸಿದ್ಧತೆ ಮಾಡಿಕೊಳ್ಳಬೇಕೆಂದು ಹೇಳಿದರು. ವಿದ್ಯಾರ್ಥಿಗಳ ಕೌಶಲ್ಯ ಅಭಿವೃದ್ಧಿಗೆ ಮಹಾವಿದ್ಯಾಲಯವು ಕೈಗೊಂಡಿರುವ ಹಲವು ಉಪಕ್ರಮಗಳ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು.

ಮಾಜಿ ವಿದ್ಯಾರ್ಥಿಗಳು ಮಹಾವಿದ್ಯಾಲಯಕ್ಕೆ ಭೇಟಿ ನೀಡುವದರಿಂದ, ವಿದ್ಯಾರ್ಥಿಗಳಿಗೆ ಕೈಗಾರಿಕಾ ಕ್ಷೇತ್ರದಲ್ಲಿನ ಆಗು ಹೋಗುಗಳ ಅರಿವು ಹೊಂದಿ, ಆ ನಿಟ್ಟಿನಲ್ಲಿ ಪ್ರಯತ್ನ ಶೀಲರಾಗಲು ಸಹಕಾರಿಯಾಗುತ್ತದೆ ಎಂದು ಪ್ರಾಚಾರ್ಯ ಡಾ.ವಿ.ಎ ಕುಲಕರ್ಣಿ ಹೇಳಿದರು.

ಎಲೆಕ್ಟ್ರಾನಿಕ್ಸ್ ಮತ್ತು ಕಮ್ಯುನಿಕೇಶನ್ ವಿಭಾಗದ ಮುಖ್ಯಸ್ಥರಾದ ಡಾ.ಮಹೇಂದ್ರ ಮ. ದೀಕ್ಷಿತ್ ಕಾರ್ಯಕ್ರಮ ಆಯೋಜಿಸಿದ್ದರು. ಪ್ರೊ.ರೋಹಿಣಿ ಕಲ್ಲೂರ, ಪ್ರೊ.ನಿಖಿಲ್ ಕುಲಕರ್ಣಿ, ಪ್ರೊ.ಸೂರಜ್ ಕಡ್ಲಿ ಹಾಗೂ ಪ್ರೊ.ವಿಜಯಲಕ್ಷ್ಮಿ ಕಲಾಲ್ ಹಾಗೂ ಐದನೇ ಸೆಮಿಸ್ಟರ್‌ನ 120ಕ್ಕೂ ಅಧಿಕ ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.